ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail :registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ:ಎಸಿ7/189/2015-16

ದಿನಾಂಕ: 20-11-2024

## ಸುತ್ತೋಲೆ

ವಿಷಯ: ಸ್ನಾತಕೋತ್ತರ ಪ್ರೋಗ್ರಾಂನ ಪ.ಜಾತಿ/ಪ.ಪಂಗಡ ವಿದ್ಯಾರ್ಥಿಗಳ ಪ್ರವೇಶಾತಿ ಸಮಯದಲ್ಲಿ ಸಲ್ಲಿಸಿರುವ ಮೂಲ ದಾಖಲೆಗಳ ಬಗ್ಗೆ.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 19-11-2024.

*****

ಮೈಸೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳು ಸ್ನಾತಕೋತ್ತರ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿವೇತನವು(Scholarship) ಪಾವತಿಯಾಗದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಾತಿ ಸಮಯದಲ್ಲಿ ಸಲ್ಲಿಸಿರುವ ಸ್ನಾತಕ ಪದವಿ ಮತ್ತು ಎಸ್.ಎಸ್.ಎಲ್.ಸಿ. ಅಂಕಪಟ್ಟಿಗಳ ಮೂಲ ದಾಖಲೆಗಳನ್ನು ನೀಡಬೇಕೆಂದು ಸಲ್ಲಿಸುವ ಮನವಿಯ ಸಂಬಂಧ, ಸಮಾಜ ಕಲ್ಯಾಣ ಇಲಾಖೆ ಮತ್ತು ವಿಶ್ವವಿದ್ಯಾನಿಲಯದ ಕುಲಸಚಿವರಿಂದ ಪ್ರತ್ಯೇಕ ಆದೇಶ ಪಡೆಯುವುದು. ವಿದ್ಯಾರ್ಥಿಗಳ ಮುಂದಿನ ಭವಿಷ್ಯದ ಉದ್ದೇಶಗಳಿಗೆ ಅನುಕೂಲವಾಗಲೆಂದು ವಿಶ್ವವಿದ್ಯಾನಿಲಯಕ್ಕೆ ಪಾವತಿಸಿಬೇಕಾಗಿರುವ ನಿಗದಿತ ಶುಲ್ಕವನ್ನು ಮರುಪಾವತಿಸುವ ಷರತ್ತಿಗೆ ಒಳಪಡುವ ಬಗ್ಗೆ ಸೂಕ್ತ ಮುಚ್ಚಳಿಕೆಯನ್ನು ಪಡೆದು ವಿಭಾಗದ ಅಧ್ಯಕ್ಷರ ಜವಾಬ್ದಾರಿಯಡಿಯಲ್ಲಿ ವಿತರಿಸುವಂತೆ ತಿಳಿಸಲಾಗಿದೆ.

ಮುಂದುವರೆದು, ಇಂತಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವು ಅವರ ಖಾತೆಗೆ ನೇರವಾಗಿ ಬಿಡುಗಡೆಯಾದ ನಂತರ ವಿಶ್ವವಿದ್ಯಾನಿಲಯಕ್ಕೆ ಪೂರ್ಣ ಶುಲ್ಕ ಪಾವತಿಮಾಡಿಕೊಳ್ಳುವುದು. ಆದ್ದರಿಂದ ಸಕಾಲದಲ್ಲಿ ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ ಹಾಗೂ Digi Lockerನಲ್ಲಿ ಅಂಕಪಟ್ಟಿಗಳನ್ನು Access ಮಾಡಲು ಅನಾನುಕೂಲವಾಗುವುದನ್ನು ತಡೆಯಲು ವಿಭಾಗದ ಅಧ್ಯಕ್ಷರು ವೈಯಕ್ತಿಕ ಗಮನಹರಿಸಿ ಸಕಾಲದಲ್ಲಿ ಬಾಕಿ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳಲು ಕ್ರಮವಹಿಸುವಂತೆ ತಿಳಿಸಲಾಗಿದೆ.

**ಕುಲಸಚಿವರಿಂದ ಕರಡು ಅನುಮೋದಿಸಿದೆ**

Sd/- 22/11
ಉಪಕುಲಸಚಿವ(ಶೈಕ್ಷಣಿಕ)
ಉಪ ಕುಲಸಚಿವರು (ಶೈಕ್ಷಣಿಕ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಇವರಿಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ ನಿರ್ದೇಶಕರುಗಳು/ ಸಂಯೋಜನಾಧಿಕಾರಿಗಳು/ ಮುಖ್ಯಸ್ಥರು, ಮಾನಸಗಂಗೋತ್ರಿ, ಮೈಸೂರು.
2. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಡಾ.ಕೆ.ರಾಮಚಂದ್ರಕಿಣಿ, ಅಧ್ಯಕ್ಷರು, Admission Reformation Regulation and Implementation Committee,ಜೈವಿಕ ತಂತ್ರಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
4. ಕುಲಸಚಿವರು (ಪರೀಕ್ಷಾಂಗ) ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.-ಮುಂದಿನ ಕ್ರಮಕ್ಕಾಗಿ.
5. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ಐಸಿಡಿ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಸುತ್ತೋಲೆಯನ್ನು ವಿದ್ಯಾರ್ಥಿಗಳ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕೆಂದು ಕೋರಿದೆ.
7. ನಿರ್ದೇಶಕರು, ಪಿ.ಎಂ.ಇ.ಬೋರ್ಡ್, ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.
10. ಎಲ್ಲಾ ಉಪಕುಲಸಚಿವರುಗಳು /ಸಹಾಯಕ ಕುಲಸಚಿವರುಗಳು/ ಅಧೀಕ್ಷಕರುಗಳು, ಆಡಳಿತ ಶಾಖೆ ಮತ್ತು ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಮಾನ್ಯಕುಲಪತಿ/ ಕುಲಸಚಿವ/ ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಗಳು ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಕಛೇರಿ ಪ್ರತಿ.

SI/AC7

Mr. ... to attend
24/11